RNU AIR DHARWAD

**MARCH 14,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವರು: ವಿವೇಕಾದಿತ್ಯ ಕನಿಯಾಲ**

<><><>

**ಮಹಾನಗರ ಪಾಲಿಕೆ ಹಾಗೂ ಪುರಸಭೆಗಳ ವ್ಯಾಪ್ತಿಯ,** ರಸ್ತೆಗಳ ನಿರ್ಮಾಣ ಮತ್ತು ನಿರ್ವಹಣೆ, ರಾಜ್ಯ ಸರ್ಕಾರಗಳ ಜವಾಬ್ದಾರಿ; ಆದರೆ ಆರ್ಥಿಕ ಸಂಕಷ್ಟ ಎದುರಿಸುತ್ತಿರುವ, ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯ, ರಸ್ತೆಗಳ ಕಾಮಗಾರಿಗೆ, ವಿಶೇ ‘ವಾಗಿ ಕೇಂದ್ರ ಸರ್ಕಾರದ, ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯದ ಮೂಲಕ, ಹಣ ಒದಗಿಸಲು ಯೋಜಿಸಲಾಗಿದೆ ಎಂದು, ಧಾರವಾಡ ಲೋಕಸಭಾ ಕ್ಷೇತ್ರದ ಸಂಸದ ಹಾಗೂ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಎಕ್ಸ್ ಮಾಧ್ಯಮದಲ್ಲಿ ಈ ವಿಷಯ ಪ್ರಕಟಿಸಿರುವ ಅವರು, ಕೇಂದ್ರದ ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ಅವರೊಂದಿಗೆ, ಸಮಾಲೋಚಿಸಿದ್ದಾಗಿ ಹೇಳಿದ್ದಾರೆ.

<><><>

**ಇಂದು ಹೋಳಿ ಹುಣ್ಣಿಮೆ. ಉತ್ತರ ಕರ್ನಾಟಕ ಭಾಗದಲ್ಲಿ,** ಹೋಳಿ ಹುಣ್ಣಿಮೆಗೆ ಜಾನಪದೀಯ ಸೊಗಡಿದೆ. ಆಚರಣೆಯಲ್ಲಿ, ಹಿರಿಯರ ಲಾವಣಿ ಪದಗಳ ಸೊಬಗಿದೆ. ಈ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಹುಬ್ಬಳ್ಳಿಯ ಹಿರಿಯ ಜಾನಪದ ವಿದ್ವಾಂಸ, ರಾಮಣ್ಣ ಮೂಲಗಿ.

<><><>

**ಹೋಳಿ ಹುಣ್ಣಿಮೆ ಹಿನ್ನೆಲೆಯಲ್ಲಿ,** ಗಣ್ಯರು ನಾಡಿನ ಜನತೆಗೆ ಶುಭಾಶಯಗಳನ್ನು ಕೋರಿದ್ದಾರೆ.

<><><>

**ಅಡಕೆ ಬೆಳೆಗಾರರ ಹಿತ ಕಾಯಲು,** ಬೆಲೆ ಸ್ಥಿರತೆ, ಸಂಶೋಧನೆ, ವಿಸ್ತರಣೆ ಹಾಗೂ ಮಾರುಕಟ್ಟೆ ಸೌಲಭ್ಯ ಒದಗಿಸಲು, ಅಡಕೆ ಮಂಡಳಿ ಸ್ಥಾಪಿಸುವಂತೆ, ದಾವಣಗೆರೆ ಸಂಸದರಾದ ಪ್ರಭಾ ಮಲ್ಲಿಕಾರ್ಜುನ, ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.  ಲೋಕಸಭೆಯಲ್ಲಿ ಮಾತನಾಡಿದ ಅವರು, ಬಿಹಾರದ ‘ಮಖಾನಾ ಮಂಡಳಿ’ ಮಾದರಿಯಲ್ಲಿ, ಕರ್ನಾಟಕದಲ್ಲಿ ‘ಅಡಕೆ ಮಂಡಳಿ’ ಸ್ಥಾಪಿಸಲು, ಅವರು ಮನವಿ ಮಾಡಿದರು. ದೇಶದ ಒಟ್ಟು ಅಡಕೆ ಉತ್ಪಾದನೆಯ, ಶೇಕಡ 40 ರಷ್ಟು ಹಾಗೂ ಹತ್ತು ಲಕ್ಷಕ್ಕೂ ಅಧಿಕ ಕುಟುಂಬಗಳು ಅವಲಂಬಿತವಾಗಿವೆ, ಎಂದರು.

<><><>

**ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾದೆಮಿ,** 2024ನೇ ಸಾಲಿನ ಗೌರವ ಪ್ರಶಸ್ತಿ ಹಾಗೂ ಪುಸ್ತಕ ಪುರಸ್ಕಾರ ಪ್ರಕಟಿಸಿದೆ. ಸಾಹಿತ್ಯ ಕ್ಷೇತ್ರದಲ್ಲಿ ಗೌರವ ಪ್ರಶಸ್ತಿಗೆ ಮಂಗಳೂರಿನ ಎಂ.ಪ್ಯಾಟ್ರಿಕ್ ಮೊರಾಸ್, ಕಲೆ ಕ್ಷೇತ್ರದಲ್ಲಿ ಜೊಯಲ್ ಪಿರೇರಾ ಹಾಗೂ ಜಾನಪದ ಕ್ಷೇತ್ರದಲ್ಲಿ ಹಳಿಯಾಳದ ಸೊಬೀನಾ ಮೊತೇಶ್ ಕಾಂಬ್ರೇಕರ್ ರವರು ಆಯ್ಕೆಯಾಗಿದ್ದಾರೆ. ಪುಸ್ತಕ ಪುರಸ್ಕಾರಕ್ಕೆ ಕೊಂಕಣಿ ಕವನ ವಿಭಾಗದಲ್ಲಿ ಫೆಲ್ಸಿ ಲೋಬೋ ದೇರೆಬೈಲ್ ಅವರ ‘ಪಾಲ್ವಾ ಪೊಂತ್’, ಲೇಖನ ವಿಭಾಗದಲ್ಲಿ ಕಾರ್ಕಳದ ವಲೇರಿಯನ್ ಸಿಕ್ವೇರ ಅವರ ‘ಶೆತಾಂ ಭಾಟಾಂ ತೊಟಾಂನಿ’ ಕೃತಿ ಆಯ್ಕೆಯಾಗಿದೆ ಎಂದು ಅಕಾದೆಮಿ ಅಧ್ಯಕ್ಷ ಜೋಕಿಂ ಸ್ಟ್ಯಾನಿ ಅಲ್ವಾರಿಸ್ ತಿಳಿಸಿದ್ದಾರೆ.

<><><>

**ಮುಕ್ತ, ನ್ಯಾಯಯುತ ಹಾಗೂ ಪಾರದರ್ಶಕತೆ** ಒಳಗೊಂಡಂತೆ ಚುನಾವಣಾ ಪ್ರಕ್ರಿಯೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ, ಭಾರತ ಚುನಾವಣಾ ಆಯೋಗವು ವಿವಿಧ ರಾಜಕೀಯ ಪಕ್ಷಗಳ ಅಧ್ಯಕ್ಷರು ಹಾಗೂ ನಾಯಕರೊಂದಿಗೆ ಸಭೆಗಳನ್ನು  ನಡೆಸುವಂತೆ ಎಲ್ಲ ಚುನಾವಣಾಧಿಕಾರಿಗಳಿಗೆ ಸೂಚಿಸಿದೆ. ಕಾನೂನಿನ ಚೌಕಟ್ಟಿನೊಳಗೆ ಸಂವಹನ ನಡೆಸಿ, ರಾಷ್ಟ್ರೀಯ ಹಾಗೂ ರಾಜ್ಯ ರಾಜಕೀಯ ಪಕ್ಷಗಳ ಸಲಹೆಗಳನ್ನು ಕ್ರೋಢೀಕರಿಸಿ, ಏಪ್ರಿಲ್ 30 ರೊಳಗೆ ಭಾರತ ಚುನಾವಣಾ ಆಯೋಗಕ್ಕೆ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ. ತಾಲೂಕು ಮಟ್ಟದಲ್ಲಿ ಚುನಾವಣಾ ನೋಂದಣಾಧಿಕಾರಿಗಳು, ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ರಾಜ್ಯ ಮಟ್ಟದಲ್ಲಿ ಮುಖ್ಯ ಚುನಾವಣಾಧಿಕಾರಿಗಳು ಸಭೆಯ ನೇತೃತ್ವ ವಹಿಸಲಿದ್ದಾರೆ. ವಿವಿಧ ರಾಜಕೀಯ ಪಕ್ಷಗಳೊಂದಿಗೆ ಅನುಕೂಲಕರ ಸಮಯದಲ್ಲಿ ಸಭೆ ಆಯೋಜಿಸಲು ವಿವಿಧ ರಾಜಕೀಯ ಪಕ್ಷಗಳಿಗೆ ಪತ್ರಗಳನ್ನು ರವಾನಿಸಲಾಗಿದೆ.

<><><>

**ಕೊಪ್ಪಳ ಜಿಲ್ಲೆ ಕುಷ್ಟಗಿ ತಾಲೂಕು ವ್ಯಾಪ್ತಿಯಲ್ಲಿ** 15 ಕ್ಕೂ ಹೆಚ್ಚಿನ ಪವನ ವಿದ್ಯುತ್ ಕಂಪೆನಿಗಳ ವಾಹನ ಸಂಚಾರದಿಂದ ತಾಲೂಕಿನ ಪ್ರಮುಖ ರಸ್ತೆಗಳು ಹಾಳಾಗಿದ್ದು, ರೈತರು ಹಾಗೂ ಜನಸಾಮಾನ್ಯರು ತೊಂದರೆ ಅನುಭವಿಸುವಂತಾಗಿದೆ. ಸರ್ಕಾರವು ಕೂಡಲೇ ಕ್ರಮ ವಹಿಸಬೇಕು ಎಂದು ವಿರೋಧ ಪಕ್ಷದ ಮುಖ್ಯ ಸಚೇತಕ ಹಾಗೂ ಕುಷ್ಟಗಿ ಶಾಸಕ ದೊಡ್ಡನಗೌಡ ಪಾಟೀಲ್ ವಿಧಾನಸಭೆಯಲ್ಲಿ ಒತ್ತಾಯಿಸಿದ್ದಾರೆ. 45 ಟನ್ ಭಾರವಿರುವ ಪವನ ವಿದ್ಯುತ್ ಯಂತ್ರೋಪಕರಣಗಳನ್ನು ಕಂಟೇನರ್ ಲಾರಿಗಳು ಹೊತ್ತು ಸಾಗುವ ಕಾರಣದಿಂದ ರಸ್ತೆಗಳ ಗುಣಮಟ್ಟ ಹದಗೆಟ್ಟಿದೆ. ರಸ್ತೆಗಳನ್ನು ಪುನರ್ ನಿರ್ಮಿಸಿ, ಗುಣಮಟ್ಟ ಕಾಪಾಡುವ ನಿಟ್ಟಿನಲ್ಲಿ ಇಂಧನ ಸಚಿವರು ಹಾಗೂ ಇಲಾಖೆ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.

<><><>

**ಬೇಸಿಗೆ ಕಾಲಾವಧಿಯಲ್ಲಿ ಕಲಬುರಗಿ** ಜಿಲ್ಲೆಯಲ್ಲಿ ಉಷ್ಣಾಂಶವು 40 ಡಿಗ್ರಿ ಸೆಲ್ಸಿಯಸ್ ಗೆ ತಲುಪುತ್ತಿದ್ದು, ಜಿಲ್ಲೆಯಾದ್ಯಂತ ಕುಡಿಯುವ ನೀರಿನ ಸಮಸ್ಯೆ ಹಾಗೂ ಜಾನುವಾರುಗಳಿಗೆ ನೀರು ಹಾಗೂ ಮೇವಿನ ಸಮಸ್ಯೆ ಆಗದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಸಭೆಯಲ್ಲಿ ಅವರು ಮಾತನಾಡಿದರು.

<><><>